**ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲ**

ದಿನಾಂಕ : 25-06-2017

# ಪ್ರಕಟಣೆಯ ಕೃಪೆಗಾಗಿ

## ನಿರುದ್ಯೋಗಿ ಯುವಕ ಯುವತಿಯರಿಗೆ ಜಾಗೃತಿ ಶಿಬಿರ

ಕೊಳ್ಳೇಗಾಲ : 25-06-2018 : ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಚಾಮರಾಜನಗರ ಹಾಗೂ ಜೆಎಸ್‌ಎಸ್ ರುಡ್‌ಸೆಟ್ ಸಂಸ್ಥೆ, ಮರಿಯಾಲ ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ 27-6-2018ರಂದು ಕೊಳ್ಳೇಗಾಲ ತಾಲ್ಲೂಖಿನ ಆಸಕ್ತ ನಿರುದ್ಯೋಗಿ ಯುವಕ – ಯುವತಿಯರಿಗೆ ಹಾಗೂ ಭಾವಿ ಉದ್ಯಮದಾರರಿಗೆ ಸ್ವಂತ ಉದ್ಯಮವನ್ನು ಸ್ಥಾಪಿಸಲು "ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆ, ಮುಖ್ಯಮಂತ್ರಿ ಸ್ವಯಂ ಉದ್ಯೋಗ ಸೃಜನಾ ಯೋಜನೆ ಹಾಗೂ ಎಸ್‌ಇಪಿ/ ಟಿಎಸ್‌ಪಿ ಯೋಜನೆಯಡಿ ಬ್ಯಾಂಕಿನಿಂದ ಸಾಲ ಪಡೆಯುವುದರ ಬಗ್ಗೆ ಒಂದು ದಿನದ ಜಾಗೃತಿ ಶಿಬಿರವನ್ನು ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಆಸಕ್ತರು ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಪ್ರಾಚಾರ್ಯರು ಹಾಗೂ ಜೆಎಸ್‌ಎಸ್ ರುಡ್‌ಸೆಟ್‌ನ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿರುತ್ತಾರೆ.

ಪ್ರಾಚಾರ್ಯರು
ಜೆ. ಎಸ್. ಎಸ್. ಮಹಿಳಾ ಕಾಲೇಜು
ಕೊಳ್ಳೇಗಾಲ.

# ಜಿಲ್ಲಾ ಕೈಗಾರಿಕಾ ಕೇಂದ್ರ, ಚಾಮರಾಜನಗರ
# ಜೆಎಸ್‌ಎಸ್ ರುಡ್‌ಸೆಟ್ ಸಂಸ್ಥೆ, ಮರಿಯಾಲ

ಇವರುಗಳ ಸಂಯುಕ್ತ ಆಶ್ರಯದಲ್ಲಿ

## ಉದ್ಯಮ ಶೀಲತಾ ಜಾಗೃತಿ ಶಿಬಿರ

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ಕೈಗಾರಿಕೆಗಳನ್ನು ಪ್ರಾರಂಭಿಸಲು ಆಸಕ್ತಿಯಿರುವ ಉದ್ಯಮಗಳಿಗೆ ಹಾಗೂ ಹಾಲಿ ಕೈಗಾರಿಕೋದ್ಯಮಿಗಳಿಗೆ ಹಾಗೂ ಅಂತಿಮ ವರ್ಷದ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಗುರಿಯಾಗಿರಿಸಿಕೊಂಡು ಕೈಗಾರಿಕೆ ಇಲಾಖೆಯಿಂದ ದೊರೆಯುವ ವಿವಿಧ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸಲು ಒಂದು ದಿನದ ಉದ್ಯಮ ಶೀಲತಾ ಜಾಗೃತಿ ಶಿಬಿರವನ್ನು ದಿನಾಂಕ: 27–06–2018 ರಂದು 10.00 ಗಂಟೆಗೆ ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲದಲ್ಲಿ ಏರ್ಪಡಿಸಿದೆ.

ಈ ಶಿಬಿರದಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಅನುಸರಿಸಬೇಕಾದ ಮಾರ್ಗಗಳು ಹಾಗೂ ಇಲಾಖೆಯಿಂದ ಲಭ್ಯವಿರುವ ಸೌಲಭ್ಯ ಮತ್ತು ರಿಯಾಯಿತಿಗಳ ಬಗ್ಗೆ ತಿಳುವಳಿಕೆ ನೀಡಲಾಗುವುದು. ಅಲ್ಲದೇ. ಪ್ರಧಾನ ಮಂತ್ರಿಯವರ ಉದ್ಯೋಗ ಸೃಜನಾ ಯೋಜನೆ, ಮುಖ್ಯಮಂತ್ರಿಯವರ ಸ್ವಯಂ ಉದ್ಯೋಗ ಸೃಜನಾ ಯೋಜನೆ ಹಾಗೂ ಎಸ್‌ಇಪಿ ಹಾಗೂ ಟಿಎಸ್‌ಪಿ ಯೋಜನೆಯಡಿ ಸಾಲ ಪಡೆಯಲು ಅರ್ಜಿ ಸಲ್ಲಿಸುವುದರ ಬಗ್ಗೆ, ಯೋಜನಾ ವರದಿ ತಯಾರಿಸುವುದರ ಬಗ್ಗೆ, ಹಾಗೂ ಬ್ಯಾಂಕಿನಿಂದ ಸಾಲ ಪಡೆಯುವುದರ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಲಾಗುತ್ತದೆ. ಅಲ್ಲದೇ ಜೆಎಸ್‌ಎಸ್ ರುಡ್‌ಸೆಟ್ ಸಂಸ್ಥೆಗಳ ಬಗ್ಗೆ ಹಾಗೂ ತರಬೇತಿಗಳನ್ನು ನಡೆಸುವುದರ ಬಗ್ಗೆ ವಿವರಗಳನ್ನು ಸಹ ನೀಡಲಾಗುತ್ತದೆ.

ಆದುದರಿಂದ ಕೊಳ್ಳೇಗಾಲ ತಾಲ್ಲೂಕಿಗೆ ಸೇರಿದ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರು ಮೇಲೆ ತಿಳಿಸಿದ ದಿನಾಂಕದಂದು ಬೆಳಿಗ್ಗೆ 10.00 ಗಂಟೆಗೆ ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ಈ ಮೂಲಕ ತಿಳಿಸಲಾಗಿದೆ. ಅಲ್ಲದೇ ದಿನಾಂಕ: 25–06–2018 ರೊಳಗೆ ಕೆಳಕಂಡ ಯಾವುದಾದರು ಒಂದು ದೂರವಾಣಿ ಸಂಖ್ಯೆಗೆ ಕರೆಮಾಡಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳುವುದು.

### ಹೆಚ್ಚಿನ ಮಾಹಿತಿಗಾಗಿ :

| | |
|---|---|
| ಕಛೇರಿ ದೂರವಾಣಿ | : 7760202428 |
| 1. ಶ್ರೀ ಕೆ. ಚಂದ್ರಶೇಖರ್, ನಿರ್ದೇಶಕರು | : 9606098878 |
| 2. ಶ್ರೀ ಬಿ.ಎಂ. ಚಂದ್ರಶೇಖರ್, ಯೋಜನಾಧಿಕಾರಿಗಳು | : 9663757266 |
| 3. ಶ್ರೀ ಬಿ. ಚೆನ್ನಸ್ವಾಮಿ, ಸಂಯೋಜಕರು | : 9611395363 |